ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ
ಕರ್ನಾಟಕ ಸರ್ಕಾರ
ಬಹುಮಹಡಿಗಳ ಕಟ್ಟಡ, ಗೇಟ್-4
ಪಿ.ಬಿ. ನಂ. 5257
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು-560 001
ದೂರವಾಣಿ ಸಂ.: 080-2225...

ಕರ್ನಾಟಕ ಸರ್ಕಾರ

ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ

ಸಂಖ್ಯೆ:ನಗ್ರಾಯೋನಿ/ಕಟ್ಟಡ ಪರವಾನಿಗೆ/ಸುತ್ತೋಲೆ/2015-16

22 JAN 2016

## ಸುತ್ತೋಲೆ

ವಿಷಯ: ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ನಗರ/ಪಟ್ಟಣಗಳಿಗೆ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸುವ ಮುಂಚಿತವಾಗಿಯೇ ಭೂ ಪರಿವರ್ತನೆಯಾದ ಜಮೀನುಗಳನ್ನು ವಿಭಜಿಸಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡುವ ಬಗ್ಗೆ.

ಉಲ್ಲೇಖ: ದಿನಾಂಕ:11-11-2015 ರಂದು ಸರ್ಕಾರದ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯ.

*********

ವಿಷಯಕ್ಕೆ ಸಂಬಂಧಿಸಿದಂತೆ, ಅನೇಕ ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ಯೋಜನಾ ಪ್ರಾಧಿಕಾರಗಳಿಂದ ಅವುಗಳ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಸ್ಥಳೀಯ ಯೋಜನಾ ಪ್ರದೇಶ ಘೋಷಿಸುವ ಪೂರ್ವದಲ್ಲಿ ಭೂ ಪರಿವರ್ತನೆಯಾಗಿ ವಿನ್ಯಾಸ ಅನುಮೋದನೆ ಪಡೆಯದೇ ವಿಭಜಿಸಿ ಸ್ಥಳೀಯ ಸಂಸ್ಥೆಯಲ್ಲಿ ಈಗಾಗಲೇ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಿಗೆ ನೀಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ಕೋರಿ ಬರುತ್ತಿದ್ದು, ಇಂತಹ ಪ್ರಕರಣಗಳಲ್ಲಿ ಕ್ರಮ ವಹಿಸಬೇಕಾದ ಬಗ್ಗೆ ಮಾರ್ಗದರ್ಶನ ಕೋರಿ ಪ್ರಸ್ತಾವನೆಯನ್ನು ಸಲ್ಲಿಸುತ್ತಿರುವುದನ್ನು ಗಮನಿಸಲಾಗಿದೆ.

ಈ ಕುರಿತು ಉಲ್ಲೇಖದ ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲಾಗಿದ್ದು, ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಖಾತೆ ತೆರೆದಿರುವ ಸ್ವತ್ತುಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ನಗರ/ಪಟ್ಟಣಗಳಿಗೆ ಪ್ರಾಧಿಕಾರ ರಚನೆಯ ಪೂರ್ವದಲ್ಲಿ ಹಾಗೂ ರಚನೆ ನಂತರ ಭೂ ಪರಿವರ್ತನೆಯಾದ ಜಮೀನುಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ, ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯವನ್ನು ನೀಡುವುದು ಸಮಂಜಸವಲ್ಲದ ಕಾರಣ ಇಂತಹ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಸಂಬಂಧ ಪರವಾನಿಗೆ ನೀಡಲು ತಾಂತ್ರಿಕ ಅಭಿಪ್ರಾಯ ನೀಡಬಾರದೆಂದು ಸೂಚಿಸಲಾಗಿದೆ. ಹಾಗೂ ಈ ಪ್ರಕರಣಗಳನ್ನು ಅಕ್ರಮ-ಸಕ್ರಮ ಯೋಜನೆಯಲ್ಲಿ ಪರಿಶೀಲಿಸಬಹುದಾಗಿ ತಿಳಿಸಲಾಗಿದೆ.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು

ಪ್ರತಿಯನ್ನು;

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.

2. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಗುಲ್ಬರ್ಗಾ/ ಮೈಸೂರು/ ಬೆಂಗಳೂರು.
3. ಆಯುಕ್ತರು, ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
4. ಸದಸ್ಯ-ಕಾರ್ಯದರ್ಶಿಗಳು/ ಮುಖ್ಯಾಧಿಕಾರಿಗಳು/ ಪೌರಾಯುಕ್ತರು, ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು/ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರಗಳು.
5. ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಎಲ್ಲಾ ಶಾಖಾ ಕಛೇರಿಗಳಿಗೆ.
6. ಕೇಂದ್ರ ಕಛೇರಿಯ ಎಲ್ಲಾ ಪತ್ರಾಂಕಿತ ಅಧಿಕಾರಿಗಳಿಗೆ/ತಾಂತ್ರಿಕ ಸಿಬ್ಬಂದಿಗಳಿಗೆ.
7. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಆಪ್ತ ಶಾಖೆಗೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.